# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | | **15 (56)** |
| **ಸದಸ್ಯರ ಹೆಸರು** | | **ಶ್ರೀ ಚಿದಾನಂದ್ ಎಂ. ಗೌಡ(ಪದವೀಧರರ ಕ್ಷೇತ್ರ)** |
| **ಉತ್ತರಿಸಬೇಕಾದ ದಿನಾಂಕ** | | **13.12.2021** |
| **ಉತ್ತರಿಸಬೇಕಾದವರು** | | **ಉನ್ನತ ಶಿಕ್ಷಣ ಸಚಿವರು** |
| **ಪ್ರಶ್ನೆ** | | **ಉತ್ತರ** |
| (ಅ) | ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಎಷ್ಟು ಅತಿಥಿ ಉಪನ್ಯಾಸಕರುಗಳ ಸೇವೆ ಪಡೆಯಲಾಗುತ್ತಿದೆ; ಎಷ್ಟು ವರ್ಷಗಳಿಂದ ಪಡೆಯಲಾಗುತ್ತಿದೆ; (ಮಾಹಿತಿ ನೀಡುವುದು) | ಪ್ರಸ್ತುತ, 2021-22ನೇ ಸಾಲಿನಲ್ಲಿ ಸೇವೆ ಸಲ್ಲಿಸಿರುವ ಅತಿಥಿ ಉಪನ್ಯಾಸಕರ ಸಂಖ್ಯೆ ಒಟ್ಟು 14,183.<br><br>ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 2003-04ನೇ ಸಾಲಿನಿಂದ ಇಲ್ಲಿಯವರೆವಿಗೂ ಅತಿಥಿ ಉಪನ್ಯಾಸಕರ ಸೇವೆಯನ್ನು ಪಡೆಯಲಾಗುತ್ತಿದೆ. |
| (ಆ) | ಇವರುಗಳಿಗೆ ನೀಡಲಾಗುತ್ತಿರುವ ಸೌಲಭ್ಯಗಳೇನು (ಮಾಹಿತಿ ನೀಡುವುದು) | ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳಲ್ಲಿ ಸ್ನಾತಕೋತ್ತರ ಪದವಿ ಪರೀಕ್ಷೆಯಲ್ಲಿ ಕನಿಷ್ಠ ಶೇಕಡ 55 ರಷ್ಟು ಅಂಕಗಳೊಂದಿಗೆ ಎನ್.ಇ.ಟಿ./ಎಸ್.ಎಲ್.ಇ.ಟಿ/ ಪಿ.ಹೆಚ್.ಡಿ ಹೊಂದಿರುವ ಅತಿಥಿ ಉಪನ್ಯಾಸಕರಿಗೆ ರೂ.13,000/- ಮತ್ತು ಸ್ನಾತಕೋತ್ತರ/ಎಂ.ಫಿಲ್ ಪದವೀಧರ ಅತಿಥಿ ಉಪನ್ಯಾಸಕರಿಗೆ ರೂ.11,000/- ಗಳ ಗೌರವಧನವನ್ನು ಪಾವತಿಸಲಾಗುತ್ತಿದೆ. |
| (ಇ) | ಇವರುಗಳಿಗೆ ಸೇವಾ ಭದ್ರತೆ ಒದಗಿಸಲು ಏನು ಕ್ರಮಗಳನ್ನು ಕೈಗೊಳ್ಳಲಾಗುವುದು; ಈ ಪ್ರಕ್ರಿಯೆ ಯಾವ ಹಂತದಲ್ಲಿದೆ? (ಮಾಹಿತಿ ನೀಡುವುದು) | ಅತಿಥಿ ಉಪನ್ಯಾಸಕರುಗಳು ಇಲಾಖೆಯಲ್ಲಿ ಯಾವುದೇ ಮಂಜೂರಾದ ಖಾಲಿ ಹುದ್ದೆಗಳ ಎದುರಾಗಿ ಕರ್ತವ್ಯ ನಿರ್ವಹಿಸುತ್ತಿರುವುದಿಲ್ಲ. ಬದಲಾಗಿ ಆಯಾ ಶೈಕ್ಷಣಿಕ ವರ್ಷದಲ್ಲಿ ಹೆಚ್ಚುವರಿ ಕಾರ್ಯಭಾರಕ್ಕೆ ಮಾತ್ರ ಸೀಮಿತಗೊಳಿಸಿ, ತಾತ್ಕಾಲಿಕವಾಗಿ ಅತಿಥಿ ಉಪನ್ಯಾಸಕರುಗಳನ್ನು ಆಯ್ಕೆ ಮಾಡಿ ಕೊಳ್ಳಲಾಗುತ್ತಿರುವುದರಿಂದ ಅವರುಗಳ ತಾತ್ಕಾಲಿಕ ಸೇವೆಯನ್ನು ಪರಿಗಣಿಸಿ, ಸೇವಾ ಭದ್ರತೆಯನ್ನು ಒದಗಿಸಲು ಪ್ರಸ್ತುತ ಜಾರಿಯಲ್ಲಿರುವ ನಿಯಮಗಳನ್ವಯ ಅವಕಾಶವಿರುವುದಿಲ್ಲ. |

ಇಡಿ 224 ಡಿಸಿಇ 2021

**(ಡಾ. ಸಿ.ಎನ್. ಅಶ್ವಥ್ ನಾರಾಯಣ)**
**ಉನ್ನತ ಶಿಕ್ಷಣ ಸಚಿವರು**